# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನಲ್ಲಿ ಗದಗಿನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯಕ್ಕೆ ನಿಗಧಿಪಡಿಸಿರುವ ಅನುದಾನದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 214 ಜಿಪಸ 2022, ಬೆಂಗಳೂರು, ದಿನಾಂಕ:13-05-2022.
2. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ , ಗದಗ ಇವರ ಪತ್ರ ಸಂಖ್ಯೆ:ಆರ್‌ಡಿಪಿಆರ್‌ಯು 01 ಹಣಕಾ 2022, ದಿನಾಂಕ:16-06-2022.
3. ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಪಿಎಫ್‌ಪಿ 2022, ದಿನಾಂಕ:04-04-2022.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದನ್ವಯ 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯಕ್ಕೆ ಲೆಕ್ಕ ಶೀರ್ಷಿಕೆ 2515-00-102-0-13-101, 115 ಮತ್ತು 103ರಡಿ ನಿಗಧಿಪಡಿಸಿರುವ ಅನುದಾನದಲ್ಲಿ ಮೊದಲನೇ ಹಾಗೂ ಎರಡನೇ ಕಂತಿನ ಅನುದಾನವಾಗಿ ರೂ.129.00 ಲಕ್ಷಗಳನ್ನು ಹಾಗೂ ಲೆಕ್ಕ ಶೀರ್ಷಿಕೆ ರಡಿ 4515-00-101-0-01-132 ನಿಗಧಿಪಡಿಸಿರುವ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನವಾಗಿ ರೂ.200.00 ಲಕ್ಷಗಳನ್ನು ಒಟ್ಟಾರೆಯಾಗಿ ರೂ.329.00 ಲಕ್ಷಗಳನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಮೇಲೆ ಓದಲಾದ(2)ರ ಪತ್ರದನ್ವಯ 2022-23ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ, ಗದಗ ಇವರಿಗೆ ಲೆಕ್ಕ ಶೀರ್ಷಿಕೆ 4515-00-101-0-01-132 ಅಡಿ ಆಯವ್ಯಯದಲ್ಲಿ ಒದಗಿಸಿರುವ ರೂ.800.00 ಲಕ್ಷಗಳ ಅನುದಾನದಲ್ಲಿ ಎರಡನೇ ಕಂತಿನ ಅನುದಾನವಾಗಿ ರೂ.200.00 ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ, ಗದಗ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ(3)ರ ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಪಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಮೊದಲನೇ ಹಾಗೂ ಎರಡನೇ ಕಂತಿನ ಹಣ ಬಿಡುಗಡೆಗೆ ಎಲ್ಲಾ ಆಡಳಿತ ಇಲಾಖೆಗಳ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.

ಅದರಂತೆ, ಮೇಲೆ ಓದಲಾದ(2)ರ ಪತ್ರದಲ್ಲಿ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯ, ಗದಗ ಇವರು ಕೋರಲಾದಂತೆ, 2022-23ನೇ ಸಾಲಿನ ಆಯವ್ಯಯದಲ್ಲಿ

ಲೆಕ್ಕ ಶೀರ್ಷಿಕೆ 4515-00-101-0-01-132 ಅಡಿ ಒದಗಿಸಿರುವ ರೂ.800.00 ಲಕ್ಷಗಳ ಅನುದಾನದಲ್ಲಿ ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಪಿಎಫ್‌ಪಿ 2022, ದಿನಾಂಕ:04-04-2022ರನ್ವಯ ಎರಡನೇ ಕಂತಿನ (ಜುಲೈ, ಆಗಸ್ಟ್ & ಸೆಪ್ಟೆಂಬರ್-2022) ಅನುದಾನವಾಗಿ ರೂ.200.00 ಲಕ್ಷ (ಎರಡು ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಬಹುದಾಗಿರುತ್ತದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 214 ಜಿಪಸ 2022, ಬೆಂಗಳೂರು, ದಿನಾಂಕ:02-08-2022**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯಕ್ಕೆ ಲೆಕ್ಕ ಶೀರ್ಷಿಕೆ :4515-00-101-0-01-132 ರಡಿ ನಿಗಧಿಪಡಿಸಿರುವ ಅನುದಾನ ರೂ.800.00 ಲಕ್ಷಗಳಲ್ಲಿ ಎರಡನೇ ಕಂತಿನ (ಜುಲೈ, ಆಗಸ್ಟ್ & ಸೆಪ್ಟೆಂಬರ್-2022) ಅನುದಾನವಾಗಿ ರೂ.200.00 ಲಕ್ಷ (ಎರಡು ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ವಯ ಹಾಗೂ ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಪಿಎಫ್‌ಪಿ 2022, ದಿನಾಂಕ:04-04-2022ರಲ್ಲಿ ಆಡಳಿತ ಇಲಾಖೆಗಳ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

2/8/22

**(ಎಂ.ಎಂ.ರಾಜು)**

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

2/8/2022

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ.ನಂ.5329) ಬೆಂಗಳೂರು.
4. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.

6. ಯೋಜನಾ ನಿರ್ದೇಶಕರು(ಖಜಾನೆ-2), ವಾಣಿಜ್ಯ ತೆರಿಗೆ ಇಲಾಖೆ ಕಟ್ಟಡ, 7ನೇ ಮಹಡಿ, ಗಾಂಧಿನಗರ, ಬೆಂಗಳೂರು.

7. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಗದಗ.

8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.

9 ಉಪ ನಿರ್ದೇಶಕರು ಗ್ರಾಮೀಣಾಭಿವೃದ್ಧಿ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಜಂಟಿ ಕಾರ್ಯದರ್ಶಿ(ಜಿ.ಪಂ), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.